ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಗುರುವಾರ, ದಿನಾಂಕ : 19 ನೇ ಮಾರ್ಚ್, 2020

ಬನಶಂಕರಿ 6ನೇ ಹಂತದ 4ನೇ `ಟಿ' ಬ್ಲಾಕ್ ಬಡಾವಣೆಯ ಕುಂದುಕೊರತೆಗಳ ಬಗ್ಗೆ

ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರ) :-

1310 (1467) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ನಿರ್ಮಾಣಗೊಂಡಿರುವ ಬನಶಂಕರಿ 6ನೇ ಹಂತದ 4ನೇ `ಟಿ' ಬ್ಲಾಕ್ (ಮುಂದುವರೆದ ಬಡಾವಣೆ)ನಲ್ಲಿ ನಿರ್ಮಿಸಿರುವ ಮನೆಗಳಿಗೆ ಕಾವೇರಿ ನೀರಿನ ಪೂರೈಕೆಯನ್ನು ಒದಗಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಸದರಿ ಬಡಾವಣೆಗೆ ಇದುವರೆವಿಗೂ ಕಾವೇರಿ ನೀರಿನ ಪೂರೈಕೆಯನ್ನು ಒದಗಿಸದಿರುವುದಕ್ಕೆ ಕಾರಣವೇನು;

(ಇ) ಇಲ್ಲಿನ ನಾಗರಿಕರು ಕುಡಿಯುವ ನೀರಿನ ಅಭಾವವನ್ನು ಎದುರಿಸುತ್ತಿದ್ದು, ಇನ್ನೆಷ್ಟು ದಿನಗಳಲ್ಲಿ ಕಾವೇರಿ ನೀರಿನ ಪೂರೈಕೆಯನ್ನು ಒದಗಿಸಲಾಗುವುದು ;

(ಈ) ಸದರಿ ಬಡಾವಣೆಯಲ್ಲಿನ ಮನೆಗಳಿಗೆ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಇದುವರೆವಿಗೂ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸದಿರುವುದಕ್ಕೆ ಕಾರಣವೇನು;

(ಊ) ಇನ್ನೆಷ್ಟು ದಿನಗಳಲ್ಲಿ ಒಳಚರಂಡಿ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು;

(ಋ) ಸದರಿ ಬಡಾವಣೆಯಲ್ಲಿನ ಖಾಸಗಿ ಸಂಸ್ಥೆಯವರ ಬಹುಮಹಡಿ ಕಟ್ಟಡಗಳಿಗೆ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಲು ಸದರಿ ಬ್ಲಾಕ್‌ನಲ್ಲಿನ ರಸ್ತೆಯನ್ನು ಉಪಯೋಗಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಎ) ಈ ರೀತಿ ಕ್ರಮ ಕೈಗೊಳ್ಳಲು ಸಂಬಂಧಿಸಿದ ಇಲಾಖೆಯಿಂದ ಅನುಮತಿಯನ್ನು ಪಡೆಯಲಾಗಿದೆಯೇ; ಪಡೆಯದಿದ್ದಲ್ಲಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಂಡಿರುವ ಬಗ್ಗೆ ಸಂಪೂರ್ಣ ವಿವರವನ್ನು ಒದಗಿಸುವುದು;

(ಏ) ಸದರಿ ರಸ್ತೆಯನ್ನು ಇದುವರೆವಿಗೂ ಡಾಂಬರೀಕರಣಗೊಳಸದಿರಲು ಕಾರಣವೇನು;

(ಐ) ಬಡಾವಣೆಯಲ್ಲಿನ ರಸ್ತೆಗಳನ್ನು ಡಾಂಬರೀಕರಣಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಒ) ಸದರಿ ರಸ್ತೆಯಲ್ಲಿ ಒಳಚರಂಡಿ ಪೈಪ್‌ಗಳನ್ನು ಅಳವಡಿಸುವ ಸಲುವಾಗಿ ರಸ್ತೆಯನ್ನು ಅಗೆದಾಗ ಬಂದಂತಹ ಕಲ್ಲು ಮಣ್ಣಿನ ತ್ಯಾಜ್ಯವನ್ನು ಅದೇ ರಸ್ತೆಯಲ್ಲಿನ ಖಾಲಿ ನಿವೇಶನಗಳಲ್ಲಿ ತುಂಬಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಓ) ಇದರಿಂದ ಅಲ್ಲಿನ ನಾಗರಿಕರು ತುಂಬಾ ತೊಂರೆಯನ್ನು ಅನುಭವಿಸುತ್ತಿದ್ದು, ಸರ್ಕಾರ ಅಲ್ಲಿನ ತ್ಯಾಜವನ್ನು ಬೇರೆಡೆಗೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳುವುದೇ ?